ಕರ್ನಾಟಕ ಸರ್ಕಾರ

**ನಿರ್ದೇಶಕರ ಕಚೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.**

E-mail:Commissioner.pue@gmail.com. * Ph. No.23361857, 23361858* Fax-23361852

ಸಂಖ್ಯೆ:ಪಪೂಶಿಇ/ಆಡಳಿತ/ಸಿ3/ಹುಮು/2017-18 ದಿನಾಂಕ: /08/2017

# ಜ್ಞಾಪನ

**ವಿಷಯ:** ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ 2017-18ನೇ ಶೈಕ್ಷಣಿಕ ಸಾಲಿನ ಮಧ್ಯಾವಧಿಯಲ್ಲಿ ನಿವೃತ್ತರಾಗುವ ಉಪನ್ಯಾಸಕರನ್ನು ಶೈಕ್ಷಣಿಕ ಅಂತ್ಯದವರೆಗೆ ಮುಂದುವರೆಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಆದೇಶದ ಸಂಖ್ಯೆ: ಇಡಿ 348 ಪಿಬಿಎಸ್ 2017 ದಿನಾಂಕ: 25/07/2017.

* * * * *

ಉಲ್ಲೇಖಿತ ಸರ್ಕಾರದ ಪತ್ರದಲ್ಲಿ ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ 2017-18ನೇ ಶೈಕ್ಷಣಿಕ ವರ್ಷದ ಅವಧಿಯಲ್ಲಿ ಹಲವಾರು ಉಪನ್ಯಾಸಕರು ವಯೋನಿವೃತ್ತಿಯಾಗಲಿದ್ದಾರೆ. ಈ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಪ್ರಸ್ತುತ ಶೈಕ್ಷಣಿಕ ವರ್ಷದ ಮಧ್ಯದಲ್ಲಿ ಅಂದರೆ, ಜೂನ್ 2017 ರಿಂದ ಫೆಬ್ರವರಿ 2018ರ ವರೆಗೆ ವಯೋನಿವೃತ್ತಿಯಾಗಲಿರುವ ಉಪನ್ಯಾಸಕರುಗಳ ಸೇವೆಯನ್ನು ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಅಂದರೆ ಮಾರ್ಚ್ 2018ರವರೆಗೆ ಮುಂದುವರೆಸಲು ಆದೇಶಿಸಿದೆ.

ಮುಂದುವರೆದು, 2017-18ನೇ ಸಾಲಿನ ಶೈಕ್ಷಣಿಕ ವರ್ಷದ ಮಧ್ಯದಲ್ಲಿ ಅಂದರೆ ಜುಲೈ 2017 ರಿಂದ ಫೆಬ್ರವರಿ 2018 ರವರೆಗೆ ವಯೋನಿವೃತ್ತಿಯಾಗಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರುಗಳು ದಿನಾಂಕ: 31-03-2018 ರವರೆಗೆ ಸ್ವ-ಇಚ್ಛೆಯಿಂದ ಸೇವೆಯಲ್ಲಿ ಮುಂದುವರೆಯಲು ಇಚ್ಛಿಸಿದಲ್ಲಿ ಸಂಬಂಧಿಸಿದ ಪ್ರಾಂಶುಪಾಲರುಗಳು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ನೇಮಿಸಿಕೊಳ್ಳುವ ಬಗ್ಗೆ ಸೂಕ್ತ ಕ್ರಮವಹಿಸಲು ಈ ಮೂಲಕ ತಿಳಿಸಿದೆ.

**ಷರತ್ತುಗಳು:**

1. ಈ ರೀತಿ ನೇಮಕಗೊಂಡವರಿಗೆ ಕರ್ನಾಟಕ ನಾಗರಿಕ ಸೇವಾ ನಿಯಮಗಳ ನಿಯಮ 313(ಬಿ)ರ ಪ್ರಕಾರ ವೇತನವನ್ನು ನಿಗಧಿಪಡಿಸುವ ಕುರಿತು ಪ್ರಾಂಶುಪಾಲರಿಂದ ಸೂಕ್ತ ದಾಖಲೆಗಳನ್ನು ಪಡೆದು ನಿಯಮಗಳನ್ವಯ ಆಯಾ ಜಿಲ್ಲಾ ಉಪನಿರ್ದೇಶಕರು ವೇತನ ನಿಗಧಿ ಕುರಿತು ಸೂಕ್ತ ಆದೇಶಗಳನ್ನು ಹೊರಡಿಸುವುದು.
2. ಶೈಕ್ಷಣಿಕ ವರ್ಷದ ಪ್ರಾರಂಭದ ನಂತರ ಅಂದರೆ ಜುಲೈ 2017ರ ತಿಂಗಳಿನಿಂದ ಫೆಬ್ರವರಿ 2018ರ ತಿಂಗಳ ಅಂತ್ಯದವರೆಗೆ ನಿವೃತ್ತರಾಗುವ ಉಪನ್ಯಾಸಕರಿಗೆ (ಮಾರ್ಚ್ 2018ರ ತಿಂಗಳವರೆಗೆ ಕಾರ್ಯ ನಿರ್ವಹಿಸಲು) ಮಾತ್ರ ಅನ್ವಯವಾಗತಕ್ಕದು.
3. ಒಂದು ವೇಳೆ ನೇಮಕಾತಿ ಪ್ರಕ್ರಿಯೆಯು ಅಂತಿಮಗೊಂಡು ಹೊಸ ಉಪನ್ಯಾಸಕರು ನೇಮಕಗೊಂಡಲ್ಲಿ ಇಂತಹ ನೇಮಕಾತಿ ತಾನೇ ತಾನಾಗಿ ರದ್ದುಗೊಳ್ಳತಕ್ಕದು.
4. ಕಾರ್ಯಭಾರ ಇರುವ ಹುದ್ದೆಯೆದುರು ಮಾತ್ರ ಮುಂದುವರೆಸಬೇಕಾದಲ್ಲಿ ಜಿಲ್ಲಾ ಉಪನಿರ್ದೇಶಕರ ಮೂಲಕ ಕಾರ್ಯಭಾರದ ಅವಧಿಯನ್ನು ದೃಢಪಡಿಸಿಕೊಳ್ಳುವುದು.

10/8/17

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ಇವರಿಗೆ:

ರಾಜ್ಯದ ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರುಗಳಿಗೆ – ಮುಂದಿನ ಕ್ರಮಕ್ಕಾಗಿ.

ಪ್ರತಿಗಳು:

1. ಸಂಬಂಧಿಸಿದ ರಾಜ್ಯದ ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳಿಗೆ- ಸೂಕ್ತ ಕ್ರಮಕ್ಕಾಗಿ.
2. ಕಚೇರಿ ಪ್ರತಿ.

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆ ಹಾಗೂ ಪ್ರೌಢ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ 2017-18ನೇ ಸಾಲಿನ ಶೈಕ್ಷಣಿಕ ಸಾಲಿನ ಮಧ್ಯಾವಧಿಯಲ್ಲಿ ನಿವೃತ್ತರಾಗುವ ಶಿಕ್ಷಕರನ್ನು ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಮುಂದುವರೆಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಇಡಿ 73 ಎಸ್‌ಟಿಜಿ 2016 ದಿ:25.06.2017
2. ನಿರ್ದೇಶಕರು [ಪ್ರಾಥಮಿಕ ಶಿಕ್ಷಣ], ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ:ಸಿ3(1)ಪ್ರಾ.ಶಿ.ಪುನರ್‌ನೇಮಕ/2017-18 ದಿನಾಂಕ:15.07.2017
3. ನಿರ್ದೇಶಕರು [ಪ್ರೌಢಶಿಕ್ಷಣ], ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ:ಸಿ.4(6)ಪ್ರೌ.ಶಿ.ಪುನರ್‌ನೇಮಕ/2017-18 ದಿನಾಂಕ:15.07.2017

* * *

**ಪ್ರಸ್ತಾವನೆ:**

ಮೇಲೆ ಓದಲಾದ(01)ರ ಸರ್ಕಾರದ ಆದೇಶದಲ್ಲಿ ರಾಜ್ಯ ಸರ್ಕಾರಿ ಪ್ರಾಥಮಿಕ/ಪ್ರೌಢ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ 2016-17ನೇ ಸಾಲಿನ ಶೈಕ್ಷಣಿಕ ವರ್ಷದ ಮಧ್ಯದಲ್ಲಿ ವಯೋನಿವೃತ್ತಿಯಾಗಲಿರುವ ಶಿಕ್ಷಕರು ಮತ್ತು ಉಪನ್ಯಾಸಕರುಗಳ ಸೇವೆಯನ್ನು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಕೆಲವೊಂದು ಷರತ್ತುಗಳನ್ನು ವಿಧಿಸಿ, ಮುಂದುವರೆಸಲು ಅನುಮತಿ ನೀಡಲಾಗಿತ್ತು.

ಮೇಲೆ ಓದಲಾದ(02) ಮತ್ತು (03)ರ ಪತ್ರಗಳಲ್ಲಿ ನಿರ್ದೇಶಕರು [ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ] ಇವರು 2017-18ನೇ ಸಾಲಿನ ಶೈಕ್ಷಣಿಕ ವರ್ಷದ ಅವಧಿಯಲ್ಲಿ ಸರ್ಕಾರಿ ಪ್ರಾಥಮಿಕ/ಪ್ರೌಢಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಹಲವಾರು ಶಿಕ್ಷಕರು ಮತ್ತು ಉಪನ್ಯಾಸಕರು ವಯೋನಿವೃತ್ತಿಯಾಗಲಿದ್ದು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ 2017-18ನೇ ಸಾಲಿನ ಶೈಕ್ಷಣಿಕ ವರ್ಷದ ಮಧ್ಯದಲ್ಲಿ ಅಂದರೆ, ಜೂನ್ 2017 ರಿಂದ ಫೆಬ್ರವರಿ 2018ರ ವರೆಗೆ ವಯೋನಿವೃತ್ತಿಯಾಗಲಿರುವ ಶಿಕ್ಷಕರು ಮತ್ತು ಉಪನ್ಯಾಸಕರುಗಳ ಸೇವೆಯನ್ನು ಶೈಕ್ಷಣಿಕ ವರ್ಷದ ಅಂತ್ಯದವರೆಗೂ ಅಂದರೆ ಮಾರ್ಚ್ 2018ರವರೆಗೆ ಮುಂದುವರೆಸಲು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಇಡಿ 348 ಪಿಬಿಎಸ್ 2017; ಬೆಂಗಳೂರು, ದಿನಾಂಕ:25/07/2017.**

ಪ್ರಸ್ತಾವನೆಯಲ್ಲಿ ವಿವರಿಸುವ ಅಂಶಗಳ ಹಿನ್ನೆಲೆಯಲ್ಲಿ 2017-18ನೇ ಸಾಲಿನ ಶೈಕ್ಷಣಿಕ ವರ್ಷದ ಮಧ್ಯದಲ್ಲಿ ಅಂದರೆ ಜುಲೈ 2017 ರಿಂದ ಫೆಬ್ರವರಿ 2018ರವರೆಗೆ ವಯೋನಿವೃತ್ತಿಯಾಗಲಿರುವ ಸರ್ಕಾರಿ ಪ್ರಾಥಮಿಕ/ಪ್ರೌಢ ಶಾಲಾ ಶಿಕ್ಷಕರು ಹಾಗೂ ಪದವಿ ಪೂರ್ವ ಕಾಲೇಜು ಉಪನ್ಯಾಸಕರನ್ನು ದಿನಾಂಕ :31-03-2018ರವರೆಗೆ ಸೇವೆಯಲ್ಲಿ ಮುಂದುವರೆಸಲು, ಈ ಕೆಳಕಂಡ ಷರತ್ತುಗಳನ್ನೊಳಪಟ್ಟು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಹಾಗೂ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಸರ್ಕಾರದ ಅನುಮತಿ ನೀಡಲಾಗಿದೆ.